ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಮಂಡ್ಯ ಜಿಲ್ಲೆ, ಸಂತೇಬಾಚಹಳ್ಳಿ ಗ್ರಾಮದ ತಿಮ್ಮಪ್ಪನ ಗುಡ್ಡ ಪ್ರದೇಶದಲ್ಲಿ ವಾಸಿಸುತ್ತಿರುವ ನಿವೇಶನ ರಹಿತರಿಗೆ ಹಕ್ಕು ಪತ್ರ ನೀಡುವ ಬಗ್ಗೆ

ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

261 (205) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ಕೃಷ್ಣರಾಜ ಪೇಟೆ ತಾಲ್ಲೂಕು, ತಿಮ್ಮಪ್ಪನ ಗುಡ್ಡ ಅರಣ್ಯ ಪ್ರದೇಶದ ಸರ್ವೆ ನಂಬರ್ 73ರ 38.15 ಗುಂಟೆ ಪ್ರದೇಶದಲ್ಲಿ ಕಳೆದ 20 ವರ್ಷಗಳಿಂದ ಗುಡಿಸಲುಗಳನ್ನು ಹಾಕಿಕೊಂಡು ವಾಸಿಸುತ್ತಿರುವ ಸುಮಾರು 36 ಜನ ನಿವೇಶನರಹಿತರಿಗೆ, ನಿವೇಶನ ಮಂಜೂರು ಮಾಡಿ ಹಕ್ಕುಪತ್ರ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಕರ್ನಾಟಕ ಸರ್ಕಾರದ ಕಂದಾಯ ಇಲಾಖೆ ಅಧೀನ ಕಾರ್ಯದರ್ಶಿ (ಭೂ ಮಂಜೂರಾತಿ) ಪತ್ರ ಸಂಖ್ಯೆ: ಆರ್ಡಿ 64/ಎಲ್‌ಜಿಪಿ/2015, ದಿನಾಂಕ : 26-07-2016ರ ಸೂಚನೆಯ ಮೇರೆಗೆ ಸಂತೇಬಾಚಹಳ್ಳಿ ಗ್ರಾಮ ಪಂಚಾಯತಿಯ ಗ್ರಾಮ ಅರಣ್ಯ ಹಕ್ಕು ಸಮಿತಿಯವರು ದಿನಾಂಕ :

23-11-2018 ರಂದು ಸಭೆ ಸೇರಿ, ಅಲ್ಲಿ ವಾಸಿಸುತ್ತಿರುವ 36 ಜನ ನಿವೇಶನ ರಹಿತರಿಗೆ ನಿವೇಶನ ಮಂಜೂರು ಮಾಡಿ ಹಕ್ಕು ಪತ್ರ ನೀಡುವಂತೆ ನಿರ್ಣಯ ಕೈಗೊಂಡು, ಅದನ್ನು ಮಂಡ್ಯ ಜಿಲ್ಲಾಧಿಕಾರಿಯವರಿಗೆ ಕಳುಹಿಸಿದ್ದು ಈ ಬಗ್ಗೆ ತಕ್ಷಣ ಸೂಕ್ತ ಕ್ರಮ ಜರುಗಿಸಲಾಗುವುದೇ ?